ೀ

# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/12/2016-17 ದಿನಾಂಕ :22-09-2016.

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ಶ್ರೀ ಕ್ಯಾತಪಳ್ಳಿ ಮಹಾಬಲೇಶ್ವರಪ್ಪ ತಂದೆ ಚನ್ನಬಸಪ್ಪ ಗ್ರಾಮ:-ಇಟ್ಟಿಗಿ ತಾ:-ಹಡಗಲಿ | ಶ್ರೀ ಕೆ.ನಾಗಪ್ಪ ತಂದೆ ಚನ್ನಬಸಪ್ಪ ಗ್ರಾಮ:-ಇಟ್ಟಿಗಿತಾ:-ಹಡಗಲಿ |

**ವಿವಾದಿತಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಅಲಬೂರು | 64/ಎ | 1-90 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಅಲಬೂರು ಗ್ರಾಮದ ವಿವಾದಿ ತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಡಗಲಿ ತಾಲೂಕಿನ ಇಟ್ಟಿಗಿ ಗ್ರಾಮದ ನಿವಾಸಿಯಾದ ಶ್ರೀ ಕ್ಯಾತಪಳ್ಳಿ ಮಹಾಬಲೇಶ್ವರಪ್ಪ ತಂದೆ ಚನ್ನಬಸಪ್ಪ ಇವರ ಪೌತಿ ವಾರಸುಪ್ರಕಾರ ಹಕ್ಕು ಬದಲಾವಣೆಯನ್ನು ಮಾಡಲು ದಿನಾಂಕ:21.06.2016 ರಂದು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21ರ ನೋಟೀಸನ್ನು ದಿನಾಂಕ:22.06.2016 ರಂದು ಜಾರಿ ಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ:20.07.2016 ರಂದು ಶ್ರೀ ಕೆ.ನಾಗಪ್ಪತಂದೆ ಚನ್ನಬಸಪ್ಪ ಇವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ, ಎಂ.ಆರ್.ನಂ.144/15-16ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿರವರು ಈ ಕಾರ್ಯಾಲಯಕ್ಕೆ ವರದಿಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿನಾಂಕ:11.08.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನುದಿನಾಂಕ:11.08.2016 ರಿಂದ 08.09.2016ರ ವರೆಗೆ ವಿಚಾರಣೆಯನ್ನು ಮಾಡಲಾಯಿತು. ಉಭಯರು ಹಾಜರಾಗಿರುತ್ತಾರೆ. ಅರ್ಜಿದಾರರು ಹೇಳುವಂತೆ; ಸದರಿ ಪ್ರಕರಣದಲ್ಲಿ ಪೌತಿ ವಾರಸು ಪ್ರಕಾರ ಅರ್ಜಿಯನ್ನು ಸಲ್ಲಿಸಿದ್ದು, ವಂಶವೃಕ್ಷದಲ್ಲಿ ನನ್ನ ಮೂರುಜನ ಅಕ್ಕ, ತಂಗಿಯರ ಹೆಸರನ್ನು ಹೊರತುಪಡಿಸಿ ವಂಶವೃಕ್ಷ ಪಡೆದಿರುವುದಾಗಿ ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣದಲ್ಲಿ ಉಭಯ ಪಕ್ಷಕಾರರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆ ಮಾಡಲಾಗಿ, ಪೌತಿ ವಾರಸು ಪ್ರಕಾರ ಅರ್ಜಿಯನ್ನು ಸಲ್ಲಿಸಿದ್ದು, ನಮೂನೆ-21ರಲ್ಲಿ ವಿಭಾಗ ಎಂದು ಚೆಕ್‌ಲೀಸ್ಟ್‌ನಲ್ಲಿ ನಮೂದಾಗಿರುತ್ತದೆ. ಹಾಗೂ ವಂಶವೃಕ್ಷದಲ್ಲಿ ಮೂರುಜನ ಅಕ್ಕ, ತಂಗಿಯರ ಹೆಸರನ್ನು ಹೊರತುಪಡಿಸಿ ವಂಶವೃಕ್ಷವನ್ನು ಪಡೆದುಕೊಂಡಿರುವುದು ಕಂಡುಬಂದಿರುತ್ತದೆ ಕಾರಣ, ಪ್ರಕರಣವನ್ನು ಯಥಾಸ್ಥಿತಿ ಕಾಯ್ದುಕೊಳ್ಳಲು ಈ ಕೆಳಕಂಡಂತೆ ಆದೇಶ;

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆಮತ್ತು ಕಾರಣಗಳ ಆಧಾರದ ಮೇಲೆ ಎಂ.ಆರ್.ನಂ.144/2016-17ರ ಪ್ರಕರಣದಲ್ಲಿ ಅಲಬೂರು ಗ್ರಾಮದ ಸ.ನಂ.64/ಎ ವಿಸ್ತೀರ್ಣ 1-90 ಎಕರೆ ಜಮೀನಿಗೆ ಯಥಾಸ್ಥಿತಿ ಕಾಯ್ದುಕೊಳ್ಳಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:22.09.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

22/9/16
[ವಿ.ಹೆಚ್.ಮಲ್ಲಿಕಾರ್ಜುನ]
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ ಕೋಗಳಿ

ಉಪ ತಹಸೀಲ್ದಾರ್
ನಾಡ ಕಛೇರಿ,
ಕೋಗಳಿ.

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.

14/10/16